ಮಳವಳ್ಳಿ ಕ್ಷೇತ್ರದ ಶಾಲಾ ಕಾಲೇಜಿನಲ್ಲಿ ಶಿಕ್ಷಕರ ಕೊರತೆ

2378 - ಶ್ರೀಮತಿ ಮಲ್ಲಾಜಮ್ಮ (ಮಳವಳ್ಳಿ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಳವಳ್ಳಿ ಕ್ಷೇತ್ರಕ್ಕೆ ಸೇರಿದ ಸರ್ಕಾರಿ ಶಾಲಾ ಕಾಲೇಜಿನಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಬಂದಿದ್ದರೆ ಈ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ) ಈ ಕ್ಷೇತ್ರದಲ್ಲಿ ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲಾ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಈ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು?

ಉ) ಪ್ರೌಢ ಶಾಲೆ ತೆರೆಯಲು ಸರ್ಕಾರ ಹಾಕಿರುವ ಷರತ್ತನ್ನು (ಮುಂಗಡ ಪಾವತಿ) ಸಾರ್ವಜನಿಕ ಹಿತದೃಷ್ಟಿಯಿಂದ ಸಡಿಸಲಗೊಳಿಸಲು ಸಾಧ್ಯವೆ?

ಊ) ಸಾಧ್ಯವಿದ್ದಲ್ಲಿ ಯಾವಾಗ ಈ ಕಾನೂನು ಕಾರ್ಯರೂಪಕ್ಕೆ ತರಲಾಗುವುದು?

ಋ) 1991-92ನೇ ಸಾಲಿನಲ್ಲಿ ಖಾಸಗಿಯವರಿಗಾಗಿ ಹೊಸದಾಗಿ ಶಾಲೆ ತೆರೆಯಲು ಸರ್ಕಾರ ಅನುಮತಿ ಕೊಟ್ಟಿರುವ ಸಂಖ್ಯೆ ಎಷ್ಟು? (ಜಿಲ್ಲಾವಾರು ಅಂಕಿ ಅಂಶಗಳನ್ನು ಒದಗಿಸುವುದು)

ೠ) ಅವುಗಳಲ್ಲಿ ಹರಿಜನ ಆಡಳಿತ ಸಂಸ್ಥೆಗೆ ಅನುಮತಿ ಕೊಟ್ಟಿರುವ ಶಾಲೆಗಳೆಷ್ಟು?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ಸಚಿವರು):

ಅ) ಬಂದಿದೆ.

ಆ) ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಬಂದಿದೆ.

ಈ) ಈಗಾಗಲೇ ಕಪ್ಪುಹಲಗೆ ಕಾರ್ಯಕ್ರಮದಡಿಯಲ್ಲಿ 127 ಪ್ರಾಥಮಿಕ ಶಾಲಾ ಕೊಠಡಿಗಳನ್ನು ನಿರ್ಮಾಣ ಮಾಡಿದೆ. ಇನ್ನು 152 ಶಾಲಾ ಕೊಠಡಿಗಳ ಅಗತ್ಯವಿದೆ. ಈ ವರ್ಷದ ಅಯವ್ಯಯದಲ್ಲಿ 50.81 ಲಕ್ಷ ರೂ.ಗಳನ್ನು ಜಿಲ್ಲಾ ಪರಿಷತ್ ಮಂಡ್ಯ ಇವರು ಒದಗಿಸಿಕೊಂಡಿದ್ದಾರೆ. ಹಂತಹಂತವಾಗಿ ಈ ಕೊರತೆಯನ್ನು ನೀಗಿಸಲಾಗುವುದು.

ಉ) ಸಾಧ್ಯವಿರುವುದಿಲ್ಲ.

ಊ) ಉದ್ಭವಿಸುವುದಿಲ್ಲ.

ಋ) ರಾಜ್ಯದಲ್ಲಿ 1991-92ನೇ ಸಾಲಿನಲ್ಲಿ 84 ಖಾಸಗಿ ಪ್ರೌಢ ಶಾಲೆಗಳನ್ನು ತೆರೆಯಲು ಮತ್ತು 13 ಪ್ರಾಥಮಿಕ ಶಾಲೆಗಳಿಗೆ ಅನುಮತಿ ನೀಡಿದೆ.

ೠ) 84 ಖಾಸಗಿ ಪ್ರೌಢ ಶಾಲೆಗಳಲ್ಲಿ 4 ಪರಿಶಿಷ್ಟ ಜಾತಿಯ ಆಡಳಿತ ಸಂಸ್ಥೆಗೆ ಅನುಮತಿ ಕೊಟ್ಟಿದೆ.

ರಾಜ್ಯದಲ್ಲಿ ಸೀಮೆ ಎಣ್ಣೆಯ ಅಭಾವದ ಬಗ್ಗೆ

2130 - ಶ್ರೀ ಡಿ.ಬಿ. ಚಂದ್ರೇಗೌಡ (ತೀರ್ಥಹಳ್ಳಿ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸೀಮೆಎಣ್ಣೆಯ ಅಭಾವವಿರುವುದು ಮತ್ತು ಸಾರ್ವಜನಿಕರಿಗೆ ಯೋಗ್ಯದರದಲ್ಲಿ ಸೀಮೆಎಣ್ಣೆ ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?